ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ದಿನಾಂಕ : DATE : 24/3/2020

# ಕೊರೊನಾ ನೆರವಿಗೆ 10.50 ಕೋಟಿ ರೂ.

## ಸಹಕಾರ ಇಲಾಖೆಯಿಂದ ಸಿಎಂಗೆ ಹಸ್ತಾಂತರ



ಸಹಕಾರ ಇಲಾಖೆ ಸಂಗ್ರಹಿಸಿದ ಕರೊನಾ ನೆರವನ್ನು ಮುಖ್ಯಮಂತ್ರಿ ಯಡಿಯೂರಪ್ಪ ಅವರಿಗೆ ಸಚಿವ ಎಸ್. ಟಿ. ಸೋಮಶೇಖರ್ ಹಸ್ತಾಂತರಿಸಿದರು

**ವಿಕ ಸುದ್ದಿಲೋಕ** ಬೆಂಗಳೂರು

ರಾಜ್ಯದ ನಾಗರಿಕರ ಜೀವ ರಕ್ಷಣೆಗಾಗಿ ಕೋವಿಡ್-19 ತಡೆಗಟ್ಟುವ ನಿಟ್ಟಿನಲ್ಲಿ ಸರಕಾರದ ಜೊತೆ ಸಹಕಾರಿ ಕ್ಷೇತ್ರ ಕೈಜೋಡಿಸಲು ಸಹಕಾರ ಸಚಿವ ಎಸ್.ಟಿ.ಸೋಮಶೇಖರ್ ನೀಡಿದ ಕರೆಗೆ ಉತ್ತಮ ಸ್ಪಂದನೆ ಸಿಕ್ಕಿದ್ದು, ಒಂದೇ ದಿನದಲ್ಲಿ 10.50 ಕೋಟಿ ರೂ. ನೆರವು ಸಂಗ್ರಹ ಮಾಡಲಾಗಿದೆ. ಇದರಲ್ಲಿ ಐದು ಕೋಟಿ ರೂ. ಮೊತ್ತದ ಚೆಕ್ ಅನ್ನು ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರಿಗೆ ಸಚಿವ ಸೋಮಶೇಖರ್ ಅವರು ಸೋಮವಾರ ಹಸ್ತಾಂತರಿಸಿದರು.

ಈ ಕೊರೊನಾ ವೈರಸ್ ಮಹಾಮಾರಿಯಾಗಿದ್ದು ಇದರ ತಡೆಗೆ ಸ್ವಯಂ ಜಾಗೃತಿಯಿಂದ ಸರಕಾರದ ಜೊತೆ ಕೈಜೋಡಿಸುವ ಮುಖಾಂತರ ಮೆಡಿಕಲ್ ಕಿಟ್ಟುಗಳು, ಲ್ಯಾಬ್‌ಗೆ ಅಗತ್ಯ ಸಾಮಗ್ರಿಯುಳ್ಳ ಔಷಧೋಪಚಾರಕ್ಕೆ ಹಾಗೂ ಸ್ಯಾನಿಟೈಸರ್ ನಂತಹ ಅಗತ್ಯ ಸಾಮಗ್ರಿಗಳನ್ನು ಪಡೆದುಕೊಳ್ಳಲು ಆರ್ಥಿಕವಾಗಿ ಸರಕಾರಕ್ಕೆ ನೆರವಾಗಬೇಕು ಎಂದು ಹಾಲು ಒಕ್ಕೂಟ, ಬೋರ್ಡ್‌ಗಳು, ಅಪೆಕ್ಸ್ ಬ್ಯಾಂಕ್ ಸೇರಿದಂತೆ ಇತರೇ ಸಂಘ-ಸಂಸ್ಥೆಗಳು ಆರ್ಥಿಕ ಸಹಾಯ ನೀಡುವಂತೆ ಸಹಕಾರ ಸಚಿವ ಸೋಮಶೇಖರ್ ಮನವಿ ಮಾಡಿದ್ದರು. ಇದರಲ್ಲಿ ಕೃಷಿ ಮಾರಾಟ ಇಲಾಖೆಯ ವತಿಯಿಂದ 5 ಕೋಟಿ ರೂ.ಗಳನ್ನು ನೇರವಾಗಿ ಚೆಕ್ ಮೂಲಕ ಹಾಗೂ ಆರ್‌ಟಿಜಿಎಸ್ ಮೂಲಕ 5.50 ಕೋಟಿ ರೂ.ಗಳನ್ನು ಮುಖ್ಯಮಂತ್ರಿಯವರ ಪ್ರಕೃತಿಯ ಪರಿಹಾರ ನಿಧಿಗೆ ಸಲ್ಲಿಸಲಾಗಿದೆ.

ಈ ವೇಳೆ ಗೃಹ ಸಚಿವ ಬಸವರಾಜ ಬೊಮ್ಮಾಯಿ ಹಾಗೂ ಮುಖ್ಯಮಂತ್ರಿ ಅವರ ರಾಜಕೀಯ ಕಾರ್ಯದರ್ಶಿ ಎಸ್. ಆರ್. ವಿಶ್ವನಾಥ್, ಮತ್ತು ಕೃಷಿ ಮಾರಾಟ ಇಲಾಖೆಯ ನಿರ್ದೇಶಕ ಕರೀಗೌಡ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.